**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಶ್ರೀ ರಾಜಣ್ಣ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಾಲಿಗೆ ಗ್ರಾಮ ಪಂಚಾಯಿತಿ, ದೇವನಹಳ್ಳಿ ತಾಲ್ಲೂಕು ಹಾಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯಿತಿ ಭಾಲ್ಕಿ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ –ಆದೇಶ.

ಓದಲಾಗಿದೆ: 1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ಇವರ ಪತ್ರ ಸಂಖ್ಯೆ: ಬೆಂಗ್ರಾಜಿಪಂ/ಸಿ–1/ಸಿಆರ್–109/13–14, ದಿನಾಂಕ:19.08.2015

2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ಕೆಎಸ್‌ಎಸ್ 2015, ದಿನಾಂಕ:03.10.2015

3) ಶ್ರೀ ರಾಜಣ್ಣ, ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯಿತಿ, ಭಾಲ್ಕಿ (ಅಮಾನತ್ತಿನಲ್ಲಿರುವ) ಇವರ ಮನವಿ ದಿನಾಂಕ:16.04.2016

**********

**ಪ್ರಸ್ತಾವನೆ:–**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ಇವರು ಮೇಲೆ ಓದಲಾದ ಕ್ರಸಂ(1) ರ ದಿನಾಂಕ:19.08.2015 ರ ಪತ್ರದಲ್ಲಿ ಶ್ರೀ ರಾಜಣ್ಣ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಾಲಿಗೆ ಗ್ರಾಮ ಪಂಚಾಯಿತಿ, ದೇವನಹಳ್ಳಿ ತಾಲ್ಲೂಕು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಗ್ರಾಮ ಪಂಚಾಯಿತಿಗೆ ಸಂಬಂಧಿಸಿದ ಹಣವನ್ನು ವಸೂಲಿ ಮಾಡಿದ ನಂತರ ಅದನ್ನು ಸರ್ಕಾರದ ಲೆಕ್ಕಕ್ಕೆ ಜಮಾ ಮಾಡದೇ ರೂ.76,81,720/– ಗಳ ಬೃಹತ್ ಪ್ರಮಾಣದ ಮೊತ್ತವನ್ನು ದುರುಪಯೊಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದಲ್ಲದೇ ಸದರಿ ಅಧಿಕಾರಿಯು ತನಿಖೆಗೆ ವೋಚರ್‌ಗಳನ್ನು ಹಾಜರುಪಡಿಸದೇ ಬೃಹತ್ ಪ್ರಮಾಣದ ಮೊತ್ತ ರೂ.3,30,40,749/–ಗಳ ಆಕ್ಷೇಪಣೆಗೆ ಒಳಪಡಲು ಕಾರಣರಾಗಿರುತ್ತಾರೆ. ಜೊತೆಗೆ ಸದರಿಯವರು ನಿಗಧಿತ ಮೊತ್ತಕ್ಕಿಂತ ರೂ.7,13,573/– ಗಳನ್ನು ಕಡಿಮೆ ವಸೂಲು ಮಾಡುವ ಮೂಲಕ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುತ್ತಾರೆ. ಸದರಿಯವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದು ಈ ಹಿನ್ನೆಯಲ್ಲಿ ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಸರ್ಕಾರದ ಆದೇಶ ದಿನಾಂಕ:03.10.2015 ರಲ್ಲಿ ಸದರಿ ನೌಕರರನ್ನು ಮೇಲ್ಕಂಡ ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಆರೋಪದ ಹಿನ್ನಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 10(1)(ಡಿ) ರನ್ವಯ ಸೇವೆಯಿಂದ ಅಮಾನತ್ತುಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ದಿನಾಂಕ:16.04.2016 ರ ಪತ್ರದಲ್ಲಿ ಶ್ರೀ ರಾಜಣ್ಣ, ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯಿತಿ, ಭಾಲ್ಕಿ (ಅಮಾನತ್ತಿನಲ್ಲಿ) ಇವರು ಮನವಿ ಸಲ್ಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ:1912/2015(ಎಸ್.ಎಲ್.ಪಿ–31761/2013) ರಲ್ಲಿ ನೀಡಿರುವ ಆದೇಶವನ್ನು ಉಲ್ಲೇಖಿಸಿ ತಮ್ಮನ್ನು ಸೇವೆಗೆ ಪುನರ್ ಸ್ಥಾಪಿಸುವಂತೆ ಕೋರಿರುತ್ತಾರೆ.

..2..

ಸರ್ಕಾರವು ಸದರಿ ಮನವಿಯನ್ನು ಪರಿಶೀಲಿಸಿದ್ದು, ಶ್ರೀ ರಾಜಣ್ಣ, ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯಿತಿ, ಭಾಲ್ಕಿ ಇವರನ್ನು ಅಮಾನತ್ತಿನಿಂದ ತೆರವುಗೊಳಿಸಿ ಸೇವೆಯಲ್ಲಿ ಪುನರ್ ಸ್ಥಾಪಿಸಲು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ಕೆಎಸ್ಎಸ್ 2015**
**ಬೆಂಗಳೂರು, ದಿನಾಂಕ: 22.06.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಶ್ರೀ ರಾಜಣ್ಣ, ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯಿತಿ, ಭಾಲ್ಕಿ ಇವರ ಅಮಾನತ್ತನ್ನು ತೆರವುಗೊಳಿಸಿ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ಸೇವೆಗೆ ಪುನರ್ ಸ್ಥಾಪಿಸಿ ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿಯಲ್ಲಿ ಖಾಲಿ ಇರುವ ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ) ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/6/16

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಸೇವೆಗಳು ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

22/6/16

1. ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್ / ಬೆಂಗಳೂರು(ನಗರ) / ಬೆಂಗಳೂರು ಗ್ರಾಮಾಂತರ.
3. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಭಾಲ್ಕಿ / ~~ಚಿತ್ರದುರ್ಗ~~ / ಬೆಂಗಳೂರು(ದಕ್ಷಿಣ)
4. ಸಂಬಂಧಪಟ್ಟ ಅಧಿಕಾರಿಗೆ
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
6. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ಸರ್ಕಾರದ ಜಂಟಿ ಕಾರ್ಯದರ್ಶಿ(ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಇಲಾಖೆ
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.